# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **988** |
| ಸದಸ್ಯರ ಹೆಸರು | : | **ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು)** |
| ಉತ್ತರಿಸುವ ದಿನಾಂಕ | : | **17-12-2024** |
| ಉತ್ತರಿಸುವ ಸಚಿವರು | : | **ಮಾನ್ಯ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ವಲಯ ಉದ್ದಿಮೆಗಳ ಸಚಿವರು.** |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಸಣ್ಣ ಕೈಗಾರಿಕೆಗಳಲ್ಲಿ SCP/TSP ನಿಯಮಗಳನ್ನು ಸಮರ್ಪಕವಾಗಿ ಪಾಲಿಸಲಾಗುತ್ತಿದೆಯೇ; | ಸಣ್ಣ ಕೈಗಾರಿಕೆಗಳಲ್ಲಿ SCP/TSP ನಿಯಮಗಳನ್ನು ಸಮರ್ಪಕವಾಗಿ ಪಾಲಿಸಲಾಗುತ್ತಿದೆ. |
| (ಆ) | ವಾಣಿಜ್ಯ ಮತ್ತು ಸಣ್ಣ ಕೈಗಾರಿಕೆಗಳಲ್ಲಿ ಇರುವ SCP/TSP ನೀತಿಗಳು ಯಾವುವು? (ಸಂಪೂರ್ಣ ವಿವರ ನೀಡುವುದು) | ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿ SCP/TSP ಯಡಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**1. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತರವರಿಂದ ಹಂಚಿಕೆಯಾಗುವ ನಿವೇಶನ / ಪ್ಲಾಟ್ / ಶೆಡ್‌ಗಳಿಗೆ ರಿಯಾಯಿತಿ**<br><br>ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಉದ್ದಿಮೆದಾರರಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ / ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮಗಳಿಂದ ಹಂಚಿಕೆಯಾಗುವ ಗರಿಷ್ಟ 2 ಎಕರೆ ಕೈಗಾರಿಕಾ ನಿವೇಶನ / ಪ್ಲಾಟ್ / ಶೆಡ್‌ಗಳನ್ನು ಶೇ.75 ರಷ್ಟು ರಿಯಾಯಿತಿ ದರದಲ್ಲಿ ನೀಡಲಾಗುತ್ತಿದೆ.<br><br>**2. ಗುಡಿ ಮತ್ತು ಸೂಕ್ಷ್ಮ ಕೈಗಾರಿಕಾ ಘಟಕಗಳು / ಕುಶಲಕರ್ಮಿಗಳಿಗೆ ಬ್ಯಾಂಕಿನ ಸಾಲದ ಮೇಲೆ ಶೇ.60 ಸಹಾಯಧನ ಕಾರ್ಯಕ್ರಮ**<br><br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳು ಗುಡಿ ಮತ್ತು ಅತೀ ಸೂಕ್ಷ್ಮ ಕೈಗಾರಿಕಾ ಘಟಕಗಳ ಸ್ಥಾಪನೆಗೆ ಹಣಕಾಸು ಸಂಸ್ಥೆಗಳಿಂದ ಸಾಲದ ಮಂಜೂರಾತಿ ಪಡೆದ ನಂತರ ಇಲಾಖೆಯಿಂದ ಈ ಯೋಜನೆಯಡಿ ಅರ್ಹ ಸಹಾಯಧನ ಮಂಜೂರು ಮಾಡಿ ಸಾಲದ ಮೊದಲನೇ ಕಂತು ಬಿಡುಗಡೆಯಾದ ಮೇಲೆ ಸದರಿ ಸಹಾಯಧನ ಮೊತ್ತವನ್ನು ಸಂಬಂಧಪಟ್ಟ ಬ್ಯಾಂಕ್ / ಹಣಕಾಸು ಸಂಸ್ಥೆಗಳಿಗೆ ಅನುದಾನ ಲಭ್ಯತೆ ಮೇರೆಗೆ ಬಿಡುಗಡೆ ಮಾಡಲಾಗುತ್ತಿದೆ.<br><br>•ಪ್ರವರ್ತಕರು ಯೋಜನಾ ವೆಚ್ಚದ ಶೇ.10 ರಷ್ಟನ್ನು ಭರಿಸಬೇಕು.<br>•ಯೋಜನಾ ವೆಚ್ಚದ ಶೇ.90 ರಷ್ಟನ್ನು ಹಣಕಾಸು ಸಂಸ್ಥೆ / ವಾಣಿಜ್ಯ ಬ್ಯಾಂಕ್‌ಗಳು, ಸಹಕಾರ ಬ್ಯಾಂಕ್‌ಗಳು, ರೀಜನಲ್ ರೂರಲ್ ಬ್ಯಾಂಕ್ (ಪತ್ತಿನ ಸಹಕಾರ ಸಂಘಗಳನ್ನು ಹೊರತುಪಡಿಸಿ) ಗಳಿಂದ ಸಾಲವಾಗಿ ಯೋಜನೆಗೆ ಪಡೆಯಬೇಕು. |

•ಹಣಕಾಸು ಸಂಸ್ಥೆ / ವಾಣಿಜ್ಯ ಬ್ಯಾಂಕ್‌ಗಳು, ಸಹಕಾರ ಬ್ಯಾಂಕ್‌ಗಳು, ರೀಜನಲ್ ರೂರಲ್ ಬ್ಯಾಂಕ್‌ಗಳಿಂದ (ಪತ್ತಿನ ಸಹಕಾರ ಸಂಘಗಳನ್ನು ಹೊರತುಪಡಿಸಿ) ಮಂಜೂರಾದ ಸಾಲದ ಮೇಲೆ, ಇಲಾಖೆ ವತಿಯಿಂದ ರೂ.10.00 ಲಕ್ಷ ಮೀರದಂತೆ ಇರುವ ಯೋಜನೆಗಳಿಗೆ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಟ ರೂ.5.00 ಲಕ್ಷಗಳವರೆಗೂ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

**3. ಅತೀ ಸಣ್ಣ /ಸಣ್ಣ ಕೈಗಾರಿಕಾ ಘಟಕಗಳಿಗೆ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ:**

ಈ ಯೋಜನೆಯಡಿ ಪ.ಜಾ / ಪ.ಪಂ. ಉದ್ಯಮಿದಾರರು ಬ್ಯಾಂಕ್ / ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಹೊಸ ಘಟಕ ಸ್ಥಾಪಿಸುವ ಉದ್ದಿಮೆದಾರಿಗೆ ಯೋಜನಾ ವೆಚ್ಚದಲ್ಲಿ Debt Equity ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್ / ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕರ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿ ರಹಿತ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ಅನುದಾನ ಲಭ್ಯತೆ ಮೇರೆಗೆ ನೀಡಲಾಗುವುದು. ವಿಸ್ತರಣೆ / ಆಧುನೀಕರಣ / ಚಟುವಟಿಕೆ ಬದಲಾವಣೆ ಹೊಂದಿದ ಉದ್ಯಮಗಳು ಅರ್ಹವಿರುತ್ತದೆ.

ಸ್ಥಿರ ಬಂಡವಾಳದ ಮೇಲೆ ರೂ.10.00 ಕೋಟಿವರೆಗೆ ಹೂಡಿಕೆ ಮಾಡಿರುವ ಘಟಕಗಳಿಗೆ ಗರಿಷ್ಟ ರೂ.75.00 ಲಕ್ಷಗಳ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ಪಡೆಯಬಹುದಾಗಿದೆ.

**4. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಕೆ.ಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳ ಮರುಪಾವತಿ**

ದಿನಾಂಕ:01/04/2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳೂ ಸಾಲ ಪಡೆಯುವ ಸಂದರ್ಭದಲ್ಲಿ ಕೆ.ಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ.

ಅರ್ಹತೆ

•ದಿನಾಂಕ: 01/04/2017ರ ನಂತರ ಉತ್ಪಾದನೆ ಪ್ರಾರಂಭಿಸುವ ಹೊಸ ಕೈಗಾರಿಕ ಘಟಕಗಳು.

•ಮೊದಲನೇ ಕಂತಿನ ಸಾಲ ಬಿಡುಗಡೆಯಾದ ದಿನಾಂಕದಿಂದ 12 ತಿಂಗಳೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು.

**5. ವಿದ್ಯುಚ್ಛಕ್ತಿ ಸಹಾಯಧನ:**

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ:01/04/2017 ರಿಂದ ಪ್ರಾರಂಭವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ ರೂ.2 ರಂತೆ ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.

| | | |
|---|---|---|
| | | ಅರ್ಹತೆ<br>ದಿನಾಂಕ:01/04/2017ರ ನಂತರ ಉತ್ಪಾದನೆ ಪ್ರಾರಂಭಿಸುವ ಹೊಸ ಕೈಗಾರಿಕ ಘಟಕಗಳು.<br>.ಘಟಕ ಪ್ರಾರಂಭಗೊಂಡ ಅಂದರೆ ಮೊದಲ ಮಾರಾಟದ ಬಿಲ್ ದಿನಾಂಕದಿಂದ ಕನಿಷ್ಟ 6 ತಿಂಗಳೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. |

**ಸಿಐ 143 ಎಸ್‌ಎಸ್‌ಐ 2024**

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು